**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು, ಇವರು ನಿಯಮ-72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ:20ಕ್ಕೆ ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಉತ್ತರ.**

**ಪ್ರಶ್ನೆ:**

ಕೋಲಾರದಲ್ಲಿರುವ ಎಪಿಎಂಸಿಗೆ ಬೆಂಗಳೂರು, ಬೆಂಗಳೂರು ಗ್ರಾಮಾಂತರ, ತುಮಕೂರು ಜಿಲ್ಲೆ ಹಾಗೂ ಕೋಲಾರಕ್ಕೆ ಅಂಟಿಕೊಂಡಂತಿರುವ ಪಕ್ಕದ ರಾಜ್ಯದಿಂದಲೂ ಭಾರಿ ವಾಹನಗಳ ಮೂಲಕ ಸರಕುಗಳನ್ನು ಮಾರುಕಟ್ಟೆಗೆ ತರುತ್ತಾರೆ. ಬಂದಂತ ವಾಹನಗಳ ನಿಲುಗಡೆಗೆ ಯಾವುದೇ ವ್ಯವಸ್ಥೆಗಳಿಲ್ಲದೆ, ಲಾರಿಗಳನ್ನು ರಸ್ತೆಯ ಅಕ್ಕಪಕ್ಕ ನಿಲುಗಡೆ ಮಾಡುತ್ತಿರುವುದರಿಂದ ಹೆದ್ದಾರಿಯಲ್ಲಿ ಸಂಚರಿಸುವ ವಾಹನಗಳಿಗೆ ತೊಂದರೆಯಾಗುತ್ತಿದೆ. ಇದಲ್ಲದೇ ಚಾಲಕರಿಗೆ ಶೌಚಾಲಯದ ವ್ಯವಸ್ಥೆ, ಊಟಕ್ಕೆ ಹೋಟೆಲ್‌ಗಳ ವ್ಯವಸ್ಥೆ ಇಲ್ಲದೇ ತುಂಬಾ ಕಷ್ಟವನ್ನು ಅನುಭವಿಸುತ್ತಿರುವ ಹಿನ್ನೆಲೆಯಲ್ಲಿ ಕೋಲಾರ ನಗರದಲ್ಲಿ ಡಿ.ದೇವರಾಜ ಅರಸು ಟ್ರಕ್ ಟರ್ಮಿನಲ್ ವತಿಯಿಂದ ತುರ್ತಾಗಿ "ಟ್ರಕ್ ಟರ್ಮಿನಲ್" ನಿರ್ಮಿಸುವ ಅವಶ್ಯಕತೆ ಇದೆ ಈ ವಿಷಯವನ್ನು ಹಲವಾರು ಬಾರಿ ಸದನದಲ್ಲಿ ಪ್ರಸ್ತಾಪಿಸಲಾಗಿದೆ. ಈ ವಿಷಯಕ್ಕೆ ಸಂಬಂಧಿಸಿದಂತೆ ಕಳೆದ 2013-14ನೇ ಸಾಲಿನ ಆಗಿನ ಮುಖ್ಯಮಂತ್ರಿಗಳು ಆಯವ್ಯಯವನ್ನು ಮಂಡಿಸುವ ಸಮಯದಲ್ಲಿ ಕೋಲಾರ ಜಿಲ್ಲೆಗೆ ಟ್ರಕ್ ಟರ್ಮಿನಲ್ ನಿರ್ಮಿಸಲು ಶೀಘ್ರವಾಗಿ ವರದಿ ತಯಾರು ಮಾಡಲಾಗುವುದು ಎಂಬುದಾಗಿ ತಿಳಿಸಿದ್ದು, ಇದುವರೆಗೆ ಯಾವುದೇ ಕಾರ್ಯರೂಪಕ್ಕೆ ಬಂದಿರುವುದಿಲ್ಲವಾದ್ದರಿಂದ ಇದೊಂದು ಸಾರ್ವಜನಿಕ ಮಹತ್ವವಾದ ವಿಷಯವಾಗಿರುವುದರಿಂದ ಈ ವಿಷಯವನ್ನು ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

**ಉತ್ತರ:**

ಡಿ.ದೇವರಾಜ ಅರಸ್ ಟ್ರಕ್ ಟರ್ಮಿನಲ್ಸ್ ಲಿ. ಕಂಪನಿಯ ಮಾನ್ಯ ಅಧ್ಯಕ್ಷರು ಕೋಲಾರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಕೋಲಾರ ಜಿಲ್ಲಾಧಿಕಾರಿಯವರ ಸಮ್ಮುಖದಲ್ಲಿ, ಸಂಬಂಧಪಟ್ಟ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಕೋಲಾರ ಜಿಲ್ಲೆಯಲ್ಲಿ ಟ್ರಕ್ ಟರ್ಮಿನಲ್ ನಿರ್ಮಿಸಲು ಅಗತ್ಯವಿರುವ ಜಮೀನನ್ನು ಮಂಜೂರು ಮಾಡಿಸಿಕೊಳ್ಳುವ ಕುರಿತು ವಿಸ್ತೃತವಾಗಿ ನಡೆಸಲಾದ ಸಭೆಯಲ್ಲಿ ಬೆಮೆಲ್ ಹತ್ತಿರ ವಿ.ಕೋಟೆಯಿಂದ ಕುಪ್ಪಂಗೆ ಹೋಗುವ ರಾಷ್ಟ್ರೀಯ ಹೆದ್ದಾರಿಯ ಬಳಿ ಪಿಲ್ಲಾರ ಗ್ರಾಮದ ಸರ್ವೆ ನಂ.98ರಲ್ಲಿ ಸರ್ಕಾರಿ ಗೋಮಾಳಕ್ಕೆ ಸೇರಿದ ಸುಮಾರು 200 ಎಕರೆ ಜಮೀನು ಇರುವುದಾಗಿ ಕೆ.ಜಿ.ಎಫ್. ತಹಸೀಲ್ದಾರ್ ರವರು ತಿಳಿಸಿರುತ್ತಾರೆ. ಸದರಿ ಗೋಮಾಳ ಜಮೀನಿನಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣಕ್ಕಾಗಿ ಅಗತ್ಯವಿರುವ ಸುಮಾರು 50.00 ಎಕರೆ ಜಮೀನನ್ನು ಸರ್ಕಾರದ ರಿಯಾಯಿತಿ ದರದನ್ವಯ ಮಂಜೂರು ಮಾಡುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದ್ದರನ್ವಯ, ಪ್ರಸ್ತಾಪಿತ ಜಮೀನನ್ನು ಟರ್ಮಿನಲ್ ನಿರ್ಮಾಣಕ್ಕಾಗಿ ಹಂಚಿಕೆ ಮಾಡುವಂತೆ ಹಾಗೂ ಸದರಿ ಜಮೀನಿಗೆ ತಗಲುವ ವೆಚ್ಚವನ್ನು ಕಂಪನಿ ವತಿಯಿಂದ ಪಾವತಿಸಲಾಗುವುದು ಎಂದು ಕೋರಲಾಗಿತ್ತು. ಅಲ್ಲದೇ, ಪ್ರಸ್ತಾಪಿತ ಜಮೀನನ್ನು ಟರ್ಮಿನಲ್ ನಿರ್ಮಾಣಕ್ಕಾಗಿ ಹಂಚಿಕೆ ಮಾಡುವಂತೆ ದಿನಾಂಕ:01.09.2022 ರಂದು ಜಿಲ್ಲಾಧಿಕಾರಿಗಳಿಗೆ ಪತ್ರದ ಮೂಲಕ ಮತ್ತೊಮ್ಮೆ ಕೋರಲಾಗಿದೆ. ಜಮೀನು ಹಂಚಿಕೆಯಾದ ಕೂಡಲೇ ಟ್ರಕ್ ಟರ್ಮಿನಲ್ ನಿರ್ಮಿಸುವ ಕುರಿತು ಪರಿಶೀಲಿಸಲಾಗುತ್ತದೆ.

ಸಂಖ್ಯೆ: ಟಿಡಿ 168 ಟಿಸಿಕ್ಯೂ 2022

**(ಬಿ.ಶ್ರೀರಾಮುಲು)**
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು